ಅ) ಕೆ.ಎಸ್.ಆರ್.ಟಿ.ಸಿ. ಬಸ್‌ನಲ್ಲಿ ಪ್ರತಿದಿನ ಪ್ರಯಾಣ ಮಾಡುವ ಪ್ರಯಾಣಿಕರಿಗೆ ರಿಯಾಯಿತಿ ದರದಲ್ಲಿ ಬಸ್ ಪಾಸ್ ಒದಗಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ರೂ. 160-00 ರ ಪಾಸ್‌ಗಳು ಲಭ್ಯವಿಲ್ಲದೇ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನದಲ್ಲಿದೆಯೆ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) -ಬಂದಿದೆ-

ಆ) -ಗಮನದಲ್ಲಿದೆ-

ಇ) ಬೇಡಿಕೆ ಇರುವ ಸ್ಥಳಗಳಿಗೆ ಕೂಡಲೇ ಪಾಸ್‌ಗಳನ್ನು ವಿತರಿಸಲಾಗಿದೆ.

ಬಸ್‌ಗಳ ಟಾಪ್ ಮೇಲೆ ಜನ ಸಂಚಾರ.

1534(2200) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಖಾಸಗಿ ಮತ್ತು ಸರ್ಕಾರಿ ಬಸ್‌ಗಳ ಟಾಪ್ ಮೇಲೆ ಜನರು ಕುಳಿತು ಪ್ರಯಾಣ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದರಿಂದ ಅಪಘಾತಗಳಾಗುತ್ತಿರುವ ವಿಷಯವನ್ನು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ, ಜನ ಪ್ರಯಾಣಕ್ಕೆ ಆಗುತ್ತಿರುವ ತೊಂದರೆ ನಿವಾರಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) ಹೌದು

ಆ) ಹೌದು ಮಿತಿಮೀರಿದ ಪ್ರಯಾಣಿಕರು ಸಾರಿಗೆ ವಾಹನಗಳಲ್ಲಿ ಪ್ರಯಾಣ ಮಾಡಿದ ಕೆಲವು ಪ್ರಕರಣಗಳಲ್ಲಿ ಅಪಘಾತ ಸಂಭವಿಸಿದರೂ ಅಧಿಕ ಪ್ರಮಾಣದ ಅಪಘಾತಗಳಿಗೆ ಇದೊಂದೇ ಕಾರಣವಲ್ಲ.

ಇ) ಹೆಚ್ಚುತ್ತಿರುವ ಜನಸಂಖ್ಯೆಯಿಂದಾಗಿ, ಜನರು ಪ್ರಯಾಣಿಸಲು ರಾಜ್ಯಾದ್ಯಂತ ಬಸ್‌ಗಳ ಬೇಡಿಕೆ ಸಹ ಹೆಚ್ಚಾಗಿದೆ. ಎಲ್ಲಿ ರಹದಾರಿಗಳು ರಾಷ್ಟ್ರೀಕೃತವಾಗಿಲ್ಲವೋ ಅಂತಹ ಕಡೆ ಸಾಧ್ಯವಾದಷ್ಟು ಮುಕ್ತವಾಗಿ ರಹದಾರಿಗಳನ್ನು ನೀಡಿ ಹೆಚ್ಚು ಹೆಚ್ಚು ಖಾಸಗಿ

ಬಸ್ಸುಗಳನ್ನು ಪ್ರವರ್ತಿಸಲು ಕ್ರಮ ಕೈಗೊಳ್ಳಲಾಗಿದೆ. ರಾಷ್ಟ್ರೀಕೃತ ಹೆದ್ದಾರಿಗಳಲ್ಲೂ ಸಹ ಹೆಚ್ಚಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಏರ್ಪಡಿಸುವ ಬಗೆಗೆ ಪರಿಶೀಲಿಸಲಾಗುತ್ತಿದೆ.

ಶಿವಮೊಗ್ಗ ತಾಲ್ಲೂಕು ಕಛೇರಿಯ ದುರಸ್ತಿ ಹಾಗೂ ಮಿನಿ ವಿಧಾನಸೌಧ ನಿರ್ಮಾಣ.

1535(2206) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) :— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಿವಮೊಗ್ಗ ತಾಲ್ಲೂಕು ಕಛೇರಿ ಕಟ್ಟಡ ತುಂಬಾ ನಾಡುರಸ್ತಾಗಿದ್ದು ಮಳೆಗಾಲದಲ್ಲಿ ಅಲ್ಲಿ ಕೆಲಸ ನಿರ್ವಹಿಸಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಶಿವಮೊಗ್ಗ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ

ಇ) ಹಾಗಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :—

ಅ) ಬಂದಿದೆ.

ಆ) ರಾಜ್ಯದಲ್ಲಿನ ಬಾಕಿ ಉಳಿದಿರುವ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧಗಳನ್ನು ನಿರ್ಮಿಸುವ ಬಗ್ಗೆ ಹುಡ್ಕೋ ಸಂಸ್ಥೆಯಿಂದ ಸಾಲವನ್ನು ಪಡೆಯಲು ಪರಿಶೀಲಿಸಲಾಗುತ್ತಿದೆ. ಈ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಂಡ ನಂತರ ಶಿವಮೊಗ್ಗದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಪರಿಶೀಲಿಸಲಾಗುವುದು.

ಇ) ಸಧ್ಯಕ್ಕೆ ಉದ್ಭವಿಸುವುದಿಲ್ಲ.

ಸಾರಿಗೆ ಇಲಾಖೆ ಮುಖಾಂತರ ರಾಜಸ್ವ ವಸೂಲಾತಿ.

1536(2217) ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯ ಪ್ರಾದೇಶಿಕ ಸಾರಿಗೆ ಇಲಾಖೆ ಮುಖಾಂತರ ಕಳೆದ ಎರಡು ವರ್ಷಗಳಲ್ಲಿ ವಸೂಲಾದ ರಾಜಸ್ವ (ಮೋಟಾರು ವೆಹಿಕಲ್ ಟ್ಯಾಕ್ಸ್ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)